## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:**-ಜಮಖಂಡಿ ಪಟ್ಟಣದ ಸ್ಥಳೀಯ ಯೋಜನೆ (ಪರಿಷ್ಕೃತ-1)ಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:-1) ಸರ್ಕಾರದ ಆದೇಶ ಸಂಖ್ಯೆ:ನಅಇ 113 ಬೆಮಪ್ರಾ 2007, ಬೆಂಗಳೂರು ದಿನಾಂಕ:07.06.2007.

2) ಜಮಖಂಡಿ ನಗರ ಯೋಜನಾ ಪ್ರಾಧಿಕಾರದ ಪತ್ರ ಸಂಖ್ಯೆ: ನಯೋಪ್ರಾ: ಜಮಾಪ್ಲಾ(ಪ-1):07-08: 114 ದಿ.31.03.2008.

3) ದಿನಾಂಕ 28.04.2008 ರಂದು ಕಡತ ಸಂಖ್ಯೆ: ನಯೋ(6):ಉನಿ1:ಜಮಖಂಡಿಮ.ಯೋ(ಪ-1):ಅಂತಿಮ.ಅ:08ರಲ್ಲಿ ನಗರ ಯೋಜನಾ ನಿರ್ದೇಶಕರು ನೀಡಿರುವ ಅಭಿಪ್ರಾಯ.

*****

**ಪ್ರಸ್ತಾವನೆ:**

ಮೇಲೆ (1)ರ ಸರ್ಕಾರಿ ಆದೇಶದಲ್ಲಿ ಜಮಖಂಡಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಜಮಖಂಡಿ ನಗರ ಯೋಜನಾ ಪ್ರಾಧಿಕಾರವು ಜಮಖಂಡಿ ಪಟ್ಟಣ ಸ್ಥಳೀಯ ಯೋಜನಾ ಪ್ರದೇಶಕ್ಕೆ ಮಹಾ ಯೋಜನೆ (ಪರಿಷ್ಕೃತ-1)ನ್ನು ತಯಾರಿಸಿ ಅಂತಿಮ ಅನುಮೋದನೆಯನ್ನು ಕೋರಿರುತ್ತಾರೆ.

ಮೇಲೆ ಓದಲಾದ (3)ರ ನಗರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತದಲ್ಲಿ ಜಮಖಂಡಿ ಪಟ್ಟಣದ ಜನಸಂಖ್ಯೆಯು 2021 ನೇ ಇಸವಿಗೆ 1,15,000ಗಳಷ್ಟು ಬೆಳವಣಿಗೆ ಆಗಬಹುದೆಂದು ಅಂದಾಜಿಸಿ ಮಹಾ ಯೋಜನೆಯನ್ನು (ಪರಿಷ್ಕೃತ-1) ತಯಾರಿಸಲಾಗಿದೆ. ಜಮಖಂಡಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ 2220 ಹೆಕ್ಟೇರ್ ಪ್ರದೇಶದಲ್ಲಿ 1320 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 12 ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ 1320 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 686.00 ಹೆಕ್ಟೇರ್ (ಶೇ.53.60) ವಾಣಿಜ್ಯಕ್ಕಾಗಿ 66.00 ಹೆಕ್ಟೇರ್ (ಶೇ.05.15), ಕೈಗಾರಿಕೆಗಾಗಿ 39.60 ಹೆಕ್ಟೇರ್ (ಶೇ.03.09), ಸಾರ್ವಜನಿಕ: ಅರೆಸಾರ್ವಜನಿಕ ಉಪಯೋಗಕ್ಕೆ 129.99 ಹೆಕ್ಟೇರ್ (ಶೇ.10.16), ನಾಗರೀಕ ಸೌಲಭ್ಯಕ್ಕಾಗಿ 2.01 ಹೆಕ್ಟೇರ್ (ಶೇ.0.15) ಉದ್ಯಾನವನ:ಬಯಲು ಜಾಗಗಳಿಗೆ 132.00ಹೆಕ್ಟೇರ್ (ಶೇ.10.31), ಹಾಗೂ ಸಾರಿಗೆ ಮತ್ತು ಸಂಪರ್ಕಕ್ಕಾಗಿ 224.40 ಹೆಕ್ಟೇರ್ (ಶೇ.17.54)

ಪ್ರದೇಶವನ್ನು ನಿಗಧಿಪಡಿಸಲಾಗಿದೆ. ಮಹಾ ಯೋಜನೆಯನ್ನು (ಪರಿಷ್ಕೃತ-1) ಅನುಷ್ಠಾನಗೊಳಿಸಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(3)ರ ಪ್ರಕಾರ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 113 ಬೆಂರೂಪ್ರಾ 2007**
**ಬೆಂಗಳೂರು ದಿನಾಂಕ:21.07.2008**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಜಮಖಂಡಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆಗೆ (ಪರಿಷ್ಕೃತ-1) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(3)ರನ್ವಯ ಸರ್ಕಾರದ ಅಂತಿಮ ಅನುಮೋದನೆ ನೀಡಲಾಗಿದೆ.

ಮಹಾಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ. ಟಿ. ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ರವರಿಗೆ ಪ್ರಕಟಣೆಗಾಗಿ ಹಾಗೂ ಪ್ರಕಟಿಸಿದ 200 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಕಳುಹಿಸಲು ಕೋರಿದೆ.